ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 13/2/2021

ಸಾಕ್ಷಿಗಳ ಮೇಲೆ ಪ್ರಭಾವ ಬೀರಬಾರದು । ಅನುಮತಿ ಇಲ್ಲದೆ ನಗರ ತೊರೆಯದಂತೆ ಹೈಕೋರ್ಟ್ ಷರತ್ತು

# ಡಿ.ಜೆ.ಹಳ್ಳಿ ಗಲಭೆ ಕೇಸ್: ಸಂಪತ್ ರಾಜ್‌ಗೆ ಜಾಮೀನು

13-2-21

• **ಕನ್ನಡಪ್ರಭ ವಾರ್ತೆ** ಬೆಂಗಳೂರು.

ನಗರದ ಕೆ.ಜೆ. ಹಳ್ಳಿ ಮತ್ತು ಡಿ.ಜೆ. ಹಳ್ಳಿ ಗಲಭೆ ಪ್ರಕರಣ ಸಂಬಂಧ ಬಂಧನಕ್ಕೆ ಒಳಗಾಗಿರುವ ಮಾಜಿ ಮೇಯರ್ ಸಂಪತ್ ರಾಜ್‌ಗೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿ ಹೈಕೋರ್ಟ್ ಶುಕ್ರವಾರ ಆದೇಶಿಸಿದೆ.

ಜಾಮೀನು ಕೋರಿ ಸಂಪತ್ ರಾಜ್ ಸಲ್ಲಿಸಿದ್ದ ಅರ್ಜಿಯನ್ನು ಪುರಸ್ಕರಿಸಿದ ನ್ಯಾಯಮೂರ್ತಿ ಜಾನ್ ಮೈಕೆಲ್ ಕುನ್ಹಾ ಅವರು ಈ ಆದೇಶ ಮಾಡಿದರು. ಪ್ರಕರಣ ಕುರಿತ ಪೊಲೀಸರ ತನಿಖೆ ಅಂತಿಮ ಹಂತಕ್ಕೆ ಬಂದಿದೆ. ಈಗಾಗಲೇ ತನಿಖಾಧಿಕಾರಿಗಳು ನ್ಯಾಯಾಲಯಕ್ಕೆ ಎರಡು ದೋಷಾರೋಪ ಪಟ್ಟಿ ಸಲ್ಲಿಸಿದ್ದಾರೆ. ಈ ಹಂತದಲ್ಲಿ ಆರೋಪಿಗೆ ಜಾಮೀನು ನೀಡಬಹುದು ಎಂದು ನ್ಯಾಯಪೀಠ ಆದೇಶದಲ್ಲಿ ತಿಳಿಸಿದೆ.

ಸಾಕ್ಷಿಗಳ ಮೇಲೆ ಪ್ರಭಾವ ಬೀರಲು ಅಥವಾ ಸಾಕ್ಷ್ಯ ನಾಶ ಪಡಿಸಲು ಯತ್ನಿಸಬಾರದು. ಪೊಲೀಸರ ತನಿಖೆಗೆ ಸಹಕರಿಸಬೇಕು ಹಾಗೂ ವಿಚಾರಣಾ ನ್ಯಾಯಾಲಯದ ವಿಚಾರಣೆಗೆ ತಪ್ಪದೇ ಹಾಜರಾಗಬೇಕು. ಕೋರ್ಟ್ ಅನುಮತಿ ಇಲ್ಲದೆ ಬೆಂಗಳೂರು ನಗರ ಬಿಟ್ಟು ತೆರಳುವಂತಿಲ್ಲ ಎಂದು ಜಾಮೀನಿಗೆ ಷರತ್ತು ವಿಧಿಸಿರುವ ಹೈಕೋರ್ಟ್, ಒಂದೊಮ್ಮೆ ಆರೋಪಿ ಷರತ್ತು ಉಲ್ಲಂಘಿಸಿದರೆ ಜಾಮೀನು ರದ್ದು ಕೋರಿ ಸಿಸಿಬಿ ಪೊಲೀಸರು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಬಹುದು ತಿಳಿಸಿದೆ.

ಕೆ.ಜಿ. ಹಳ್ಳಿ ಮತ್ತು ಡಿ.ಜೆ.ಹಳ್ಳಿ ಗಲಭೆ ವೇಳೆ ಶಾಸಕ ಅಖಂಡ ಶ್ರೀನಿವಾಸ್ ಮೂರ್ತಿ ಅವರ ಮನೆ ಮೇಲೆ ದಾಳಿ ನಡೆಸಲು ತಮ್ಮ ಬೆಂಬಲಿಗರ ಮೂಲಕ ಕಿಡಿಗೇಡಿಗಳಿಗೆ ಕುಮ್ಮಕ್ಕು ನೀಡಿದ್ದಾರೆಂಬ ಆರೋಪ ಸಂಪತ್ ರಾಜ್ ಮೇಲೆ ಕೇಳಿ ಬಂದಿತ್ತು. ಕೊರೋನಾ ಸೋಂಕು ತಗುಲಿದ ಹಿನ್ನೆಲೆಯಲ್ಲಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದ ಸಂಪತ್ ರಾಜ್ ಪರಾರಿ ಆಗಿದ್ದರು. ತದ ನಂತರ ನ.16ರಂದು ಸಿಸಿಬಿ ಪೊಲೀಸರು ಅವರನ್ನು ಬಂಧಿಸಿದ್ದರು. 3 ದಿನ ಪೊಲೀಸ್ ಕಸ್ಟಡಿಗೆ ನೀಡಿದ್ದ ವಿಚಾರಣಾ ನ್ಯಾಯಾಲಯ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿತ್ತು. ಜಾಮೀನು ಕೋರಿ ಸಲ್ಲಿಸಿದ್ದ ಅರ್ಜಿಯನ್ನು 67ನೇ ಸಿಟಿ ಸಿವಿಲ್ ಕೋರ್ಟ್ ಡಿ.1ರಂದು ತಿರಸ್ಕರಿಸಿತ್ತು. ಹೀಗಾಗಿ, ಜಾಮೀನು ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

## ನ್ಯಾಯಾಂಗದ ಮೇಲೆ ನಂಬಿಕೆ ಇದೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು



ನ್ಯಾಯಾಂಗ ವ್ಯವಸ್ಥೆ ಮೇಲೆ ನನಗೆ ನಂಬಿಕೆ ಇದೆ. ಈ ನಂಬಿಕೆಯಿಂದಲೇ ನಾನು ಇವತ್ತು ಬಿಡುಗಡೆಯಾಗಿದ್ದೇನೆ. ಮುಂದೆ ಈ ಎಲ್ಲ ಆರೋಪಗಳಿಂದ ಮುಕ್ತನಾಗುತ್ತೇನೆ ಎಂದು ಮಾಜಿ ಮೇಯರ್ ಸಂಪತ್ ರಾಜ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಕೀಯ ಷಡ್ಯಂತ್ರದ ಬಗ್ಗೆ ನಾನೇನು ಮಾತನಾಡುವುದಿಲ್ಲ, ಸದ್ಯಕ್ಕೆ ಪ್ರಕರಣ ಕೋರ್ಟ್‌ನಲ್ಲಿ ಇರುವುದರಿಂದ ಹೆಚ್ಚು ಮಾತನಾಡುವುದಿಲ್ಲ. ನಮ್ಮ ರಾಜಕೀಯ ನಾಯಕರನ್ನು ಭೇಟಿಯಾಗುವ ಬಗ್ಗೆ ಮತ್ತು ಮುಂದಿನ ರಾಜಕೀಯದ ಕುರಿತು ಮುಂದೆ ತಿಳಿಸುತ್ತೇನೆ. ನ್ಯಾಯಾಲಯದ ಮೇಲೆ ನಂಬಿಕೆಯಿದ್ದು ನನಗೆ ನ್ಯಾಯ ಸಿಗಲಿದೆ ಎಂದರು.

## ಮಾಜಿ ಮೇಯರ್‌ರಿಂದ ನನಗೆ ಜೀವ ಬೆದರಿಕೆ: ಶಾಸಕ ಅಖಂಡ

ಪಕ್ಷದಿಂದ ಉಚ್ಚಾಟನೆ ಮಾಡುವಂತೆ ಎಐಸಿಸಿಗೆ ಪತ್ರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು



ನಗರದ ಡಿ.ಜೆ.ಹಳ್ಳಿ ಮತ್ತು ಕೆ.ಜೆ.ಹಳ್ಳಿ ಗಲಭೆ ಪ್ರಕರಣದ ಆರೋಪಿ, ಮಾಜಿ ಮೇಯರ್ ಸಂಪತ್ ರಾಜ್ ಅವರಿಂದ ತಮಗೆ ಬೆದರಿಕೆ ಇದೆ. ಅವರು ಜೈಲಿನಿಂದ ಬಿಡುಗಡೆಯಾದ ಮೇಲೆ ನನಗೆ ಏನಾದರೂ ಮಾಡುತ್ತಾರೆ ಎಂದು ಶಾಸಕ ಅಖಂಡ ಶ್ರೀನಿವಾಸ್ ಮೂರ್ತಿ ಆತಂಕ ವ್ಯಕ್ತಪಡಿಸಿದ್ದಾರೆ.

ಏಷ್ಯಾನೆಟ್ ಸುವರ್ಣ ನ್ಯೂಸ್‌ನೊಂದಿಗೆ ಮಾತನಾಡಿದ ಶಾಸಕರು, ನನಗೆ ಅನ್ಯಾಯವಾಗಿದ್ದು, ನ್ಯಾಯ ಸಿಗುವವರೆಗೂ ಹೋರಾಟ ಮಾಡುತ್ತೇನೆ. ಸಂಪತ್ ರಾಜ್ ಅವರನ್ನು ಕಾಂಗ್ರೆಸ್ ಪಕ್ಷದಿಂದ ಉಚ್ಚಾಟನೆ ಮಾಡಲು, ಕೆಪಿಸಿಸಿ ಅಧ್ಯಕ್ಷರು ಹಾಗೂ ಶಾಸಕಾಂಗ ಪಕ್ಷ ನಾಯಕ ಸಿದ್ದರಾಮಯ್ಯ ಅವರಲ್ಲಿ ಕೋರಿದ್ದೇನೆ. ಶಾಸಕಾಂಗ ಪಕ್ಷದ ಸಭೆಯಲ್ಲೂ ಮನವಿ ಮಾಡಿದ್ದೇನೆ. ಕೆಪಿಸಿಸಿ ಅಧ್ಯಕ್ಷರು ಏನು ತೀರ್ಮಾನ ಕೈಗೊಳ್ಳುತ್ತಾರೆ ನೋಡಬೇಕು. ಪಕ್ಷದ ಕೆಲ ಹಿರಿಯ ನಾಯಕರು ಸಂಪತ್ ರಾಜ್ ಪರ ಇದ್ದಾರೆ. ಹೀಗಾಗಿ, ಎಐಸಿಸಿಗೂ ಪತ್ರ ಬರೆದು ಸಂಪತ್ ರಾಜ್ ವಿರುದ್ಧ ಶಿಸ್ತುಕ್ರಮ ಜರುಗಿಸಲು ಕೋರುತ್ತೇನೆ ಎಂದರು.